ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಆರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 4ನೇ ಮಾರ್ಚ್, 2020

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಭಾರತ ಸಂವಿಧಾನದ ಕುರಿತು ವಿಶೇಷ ಚರ್ಚೆ (ಎರಡನೇ ದಿನ)

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೇ ಪಟ್ಟಿ

3. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಬಂಡೆಪ್ಪ ಖಾಶೆಂಪೂರ, ಪ್ರಿಯಾಂಕ ಖರ್ಗೆ ಹಾಗೂ ಎಂ.ವೈ. ಪಾಟೀಲ ಇವರುಗಳು** – ತೊಗರಿಯನ್ನು ಬೆಂಬಲ ಬೆಲೆಯಲ್ಲಿ ರೈತರಿಂದ ಖರೀದಿ ಮಾಡುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

2) **ಶ್ರೀಯುತರುಗಳಾದ ಡಾ. ಕೆ. ಅನ್ನದಾನಿ, ಪ್ರಿಯಾಂಕ ಖರ್ಗೆ, ನರಸಿಂಹನಾಯಕ್ (ರಾಜುಗೌಡ), ಗೂಳಿಹಟ್ಟಿ ಡಿ. ಶೇಖರ್, ಎನ್. ಮಹೇಶ್ ಹಾಗೂ ಇತರರು** – ಬೆಳಗಾವಿ ಜಿಲ್ಲೆಯ ಗೋಕಾಕ ಹಾಗೂ ಮೂಡಲಗಿ ತಾಲ್ಲೂಕುಗಳಲ್ಲಿ ಪರಿಶಿಷ್ಟ ಜಾತಿಗೆ ಸೇರದ ಇತರೆ ವರ್ಗದವರಿಗೆ ಸುಳ್ಳು ಜಾತಿ ಪ್ರಮಾಣಪತ್ರವನ್ನು ನೀಡಿರುವ ಅಧಿಕಾರಿಗಳ ಹಾಗೂ ಪ್ರಮಾಣಪತ್ರವನ್ನು ಪಡೆದಿರುವವರ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

... 2/ ..

4. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ ಅವರು** – ಕಿತ್ತೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವೀರಾಪುರ ಮತ್ತು ಅಮರಾಪುರ ಗ್ರಾಮಗಳನ್ನು ಸೇರಿಸಿ ಪ್ರತ್ಯೇಕ ಗ್ರಾಮ ಪಂಚಾಯಿತಿಯನ್ನು ರಚಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

2) **ಶ್ರೀ ಭರತ್ ಶೆಟ್ಟಿ ವೈ ಅವರು** – ದಕ್ಷಿಣ ಕನ್ನಡ ಜಿಲ್ಲೆಯ ಸರ್ಕಾರಿ ಶಾಲೆಗಳ ಮೂಲಸೌಕರ್ಯ ಅಭಿವೃದ್ಧಿಗೆ ಕ್ಷೇತ್ರವಾರು ಅನುದಾನವನ್ನು ಬಿಡುಗಡೆ ಮಾಡಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

3) **ಶ್ರೀಯುತರುಗಳಾದ ಹೆಚ್.ಕೆ. ಪಾಟೀಲ್, ಅರಗ ಜ್ಞಾನೇಂದ್ರ, ನೆಹರು ಚ. ಓಲೇಕಾರ್, ಕೆ. ರಘುಪತಿ ಭಟ್, ಲಾಲಾಜಿ ಆರ್. ಮೆಂಡನ್, ಎ.ಟಿ. ರಾಮಸ್ವಾಮಿ ಹಾಗೂ ಇತರರು** – 2011ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್‌ಗಳ ನೇಮಕಾತಿಯಲ್ಲಿ ಆದ ವಿಳಂಬ, ಕರ್ನಾಟಕ ಆಡಳಿತ ಮಂಡಳಿಯ ಆದೇಶ, ಸಚಿವ ಸಂಪುಟ ಸಭೆಯ ನಿರ್ಣಯ ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯದ ಆದೇಶಕ್ಕೆ ಅನುಗುಣವಾಗಿ ಅಡ್ವೋಕೇಟ್ ಜನರಲ್ ಅವರು ನೀಡಿರುವ ಅಭಿಪ್ರಾಯಗಳ ದಾಖಲೆಗಳ ಅನುಸಾರ ಸದರಿ ಪ್ರಕರಣದಲ್ಲಿ ಸಂವಿಧಾನದ ಅನುಚ್ಛೇದ 323(2)ರ ಉಲ್ಲಂಘನೆಯಾಗಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

4) **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು** – ವಿವಿಧ ಕಾಮಗಾರಿಗಳಿಗಾಗಿ ಭೂಮಿಯನ್ನು ಸ್ವಾಧೀನಪಡಿಸಿಕೊಂಡಾಗ ರೈತರಿಗೆ ಪರಿಹಾರದ ಜೊತೆಗೆ ಅದೇ ತಾಲ್ಲೂಕಿನಲ್ಲಿ ಸರ್ಕಾರಿ ಭೂಮಿಯನ್ನು ಪರ್ಯಾಯವಾಗಿ ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

5) **ಶ್ರೀ ವಿ. ಮುನಿಯಪ್ಪ ಅವರು** – ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರದ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿಗಾಗಿ ಕೊರೆದಿರುವ ಕೊಳವೆ ಬಾವಿಗಳಿಗೆ ಮೋಟಾರ್ ಅಳವಡಿಸಿ, ವಿದ್ಯುತ್ ಸಂಪರ್ಕ ಕಲ್ಪಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)
